# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 498 |
| ಸದಸ್ಯರ ಹೆಸರು | | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | | 13-12-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದಲ್ಲಿ ಒಟ್ಟು ಎಷ್ಟು ಅನುದಾನಿತ ಪದವಿ ಕಾಲೇಜುಗಳಿವೆ. (ಜಿಲ್ಲಾವಾರು ಮಾಹಿತಿ ಒದಗಿಸುವುದು) | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 321 ಅನುದಾನಿತ ಪದವಿ ಕಾಲೇಜುಗಳು ಬರುತ್ತವೆ.<br><br>ಜಿಲ್ಲಾವಾರು ಪಟ್ಟಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ) | ಸದರಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳೆಷ್ಟು; | ಸದರಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರಸ್ತುತ 5568 ಬೋಧಕರ ಹುದ್ದೆಗಳು ಹಾಗೂ 3957 ಬೊಧಕೇತರರ ಹುದ್ದೆಗಳು ಖಾಲಿ ಇರುತ್ತವೆ. |
| ಇ) | ಸದರಿ ಖಾಲಿ ಹುದ್ದೆಗಳ ಭರ್ತಿಗಾಗಿ ಅನುಮೋದನೆ ನೀಡಲು ಸರ್ಕಾರ ಮುಂದಾಗುವುದೇ? (ಅಗತ್ಯ ಅಧಿಸೂಚನೆಗಳೊಂದಿಗೆ ಮಾಹಿತಿ ನೀಡುವುದು) | ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರ ಒಳಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ದಿನಾಂಕ:01-09-2017 ರ ಪತ್ರದಲ್ಲಿ ಅನುಮತಿ ನೀಡಲಾಗಿದೆ. ಅದರಂತೆ, ಈವರೆಗೆ ಒಟ್ಟು 512 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖೆಯಿಂದ ಅನುಮತಿ ನೀಡಲಾಗಿರುತ್ತದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 551 ಯುಪಿಸಿ 1999, ದಿನಾಂಕ:07-08-2003 ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು 2003 ರ ನಿಯಮ 8(2) ರನ್ವಯ ದಿನಾಂಕ:01-03-2001 ರಂದು ಖಾಲಿ ಇದ್ದ ಹಾಗೂ ಆ ದಿನಾಂಕದ ನಂತರ ಖಾಲಿಯಾಗುವ ಎಲ್ಲಾ ಬೊಧಕೇತರರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುವುದರಿಂದ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೊಧಕೇತರರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮೋದನೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.<br><br>ಆದಾಗ್ಯೂ, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ / ಬೊಧಕೇತರರ ಬ್ಯಾಕ್-ಲಾಗ್ ಹುದ್ದೆಗಳೆಂದು ಗುರುತಿಸಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 290 ಯುಪಿಸಿ 2018